# ಕುವೆಂಪು ವಿಶ್ವವಿದ್ಯಾನಿಲಯ

**ಪಠ್ಯೇತರ ಚಟುವಟಿಕೆ ವಿಭಾಗ ವಿಶ್ವವಿದ್ಯಾನಿಲಯ ಕಾರ್ಯಾಲಯ ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451**

ಕುವಿಶ: ಪಚವಿ/ 529 /2019-20 ದಿನಾಂಕ: 18-02-2020

## ಸುತ್ತೋಲೆ

ವಿಷಯ: 2019-20 ನೇ ಸಾಲಿನ ಅಂತರ್ ವಿಶ್ವವಿದ್ಯಾಲಯದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ "ಸಹಕಾರ ವಿಷಯ" ಕುರಿತ ಚರ್ಚಾ ಸ್ಪರ್ಧೆಯನ್ನು ನಡೆಸುತ್ತಿರುವ ಕುರಿತು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳವು ಸಹಕಾರ ಚಳುವಳಿಯ ಅಭಿವೃದ್ಧಿಗೆ ಪೂರಕವಾದ ಸಹಕಾರ ಶಿಕ್ಷಣ ತರಬೇತಿ ಮತ್ತು ಪ್ರಚಾರ ಹೊಣೆ ಹೊತ್ತ ರಾಜ್ಯ ಮಟ್ಟದ ಮಾತೃ ಸಂಸ್ಥೆಯಾಗಿದ್ದು, ಇದು ಸಹಕಾರ ಚಳುವಳಿಯ ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗಾಗಿ ಯೋಜನೆಗಳನ್ನು ರೂಪಿಸಿಕೊಂಡು ಅವುಗಳನ್ನು ಕಾರ್ಯಗತಗೊಳಿಸುತ್ತಿದೆ. ಸಹಕಾರ ಕ್ಷೇತ್ರದಲ್ಲಿ ಭವಿಷ್ಯದ ಯುವಜನರು ಸಕ್ರೀಯವಾಗಿ ಭಾಗವಹಿಸಿ ಸಹಕಾರ ಚಳುವಳಿಯನ್ನು ಯಶಸ್ವಿಗೊಳಿಸಲು ಸಾಧ್ಯವಾಗುವಂತೆ, ಮುಂದಾಳತ್ವ, ನಾಯಕತ್ವ ವಹಿಸುವುದಕ್ಕೆ ಪ್ರೇರೇಪಿಸುವ ಉದ್ದೇಶದಿಂದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ "ಸಹಕಾರ ಕುರಿತ ಚರ್ಚಾ ಸ್ಪರ್ಧೆಯನ್ನು ನಡೆಸುವ ಉದ್ದೇಶದಿಂದ ನಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಸಹಕಾರ ವಿಷಯ ಕುರಿತು ಚರ್ಚಾ ಸ್ಪರ್ಧೆಯನ್ನು ನಡೆಸಲು ಇಚ್ಛಿಸಿದ್ದು, ಈ ಕಾರ್ಯಕ್ರಮವನ್ನು ಕುವೆಂಪು ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶಕರ ನೇತೃತ್ವದಲ್ಲಿ ದಿನಾಃ: 12-03-2020 ರಂದು ಮಧ್ಯಾಹ್ನ 02-30ಕ್ಕೆ ಎಂಬಿಎ ವಿಭಾಗದ ಸೆಮಿನಾರ್ ಹಾಲ್‌ನಲ್ಲಿ ನಡೆಸಲು ಉದ್ದೇಶಿಸಲಾಗಿದೆ. ತಾವುಗಳು ತಮ್ಮ ವಿಭಾಗದಿಂದ ಇಬ್ಬರು ವಿದ್ಯಾರ್ಥಿಗಳನ್ನು (ಪರ/ವಿರೋಧ) ಈ ಚರ್ಚಾ ಸ್ಪರ್ಧೆಯಲ್ಲಿ ಭಾಗವಹಿಸಲು ಕಳುಹಿಸಿಕೊಡಬೇಕಾಗಿ ತಮ್ಮಲ್ಲಿ ಕೋರುತ್ತೇನೆ. ಚರ್ಚಾ ಸ್ಪರ್ಧೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳ ವಿವರಗಳನ್ನು ಸಂಚಾಲಕರು, ಪಠ್ಯೇತರ ಚಟುವಟಿಕೆ ವಿಭಾಗ, ಕುವೆಂಪು ವಿಶ್ವವಿದ್ಯಾಲಯ ಇವರಿಗೆ ಇ-ಮೇಲ್ ಅಥವಾ ಮೊಬೈಲ್ (ವಾಟ್ಸ್‌ಆಪ್) ಮೂಲಕ ದಿನಾಂಕ; 05-03-2020ರೊಳಗೆ ಕಳುಹಿಸಬೇಕಾಗಿ ಕೋರಲಾಗಿದೆ.

ಸ್ಪರ್ಧೆಯಲ್ಲಿ ಜಯಶೀಲರಾಗುವ ಮೊದಲ ಇಬ್ಬರು ಸ್ನಾತಕೋತ್ತರ ವಿದ್ಯಾರ್ಥಿಗಳನ್ನು (ಒಬ್ಬರು ವಿಷಯದ ಪರವಾಗಿ ಮತ್ತೊಬ್ಬರು ವಿಷಯದ ವಿರುದ್ಧವಾಗಿ) ರಾಜ್ಯಮಟ್ಟದಲ್ಲಿ ನಡೆಯುವ ಸ್ಪರ್ಧೆಗೆ ಕಳುಹಿಸಿಕೊಡಲಾಗುವುದು. ರಾಜ್ಯಮಟ್ಟದ ಸ್ಪರ್ಧೆಯ ದಿನಾಂಕ ಹಾಗೂ ಆಯೋಜಕರ ವಿವರಗಳನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು.

ರಾಜ್ಯ ಮಟ್ಟದ ಚರ್ಚಾಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನ ರೂ. 5,000-00, ದ್ವಿತೀಯ ಬಹುಮಾನ ರೂ. 4,000-00 ಮತ್ತು ತೃತೀಯ ಬಹುಮಾನ ರೂ. 3,000-00 ಹಾಗೂ ವಿಜೇತರಾದ ವಿಶ್ವವಿದ್ಯಾಲಯಕ್ಕೆ ಒಂದು ಬೆಳ್ಳಿ ಪಾರಿತೋಷಕವನ್ನು ನೀಡಲಾಗುವುದು.

**ಚರ್ಚಾ ವಿಷಯ : ಗ್ರಾಮೀಣ ಸುಸ್ಥಿರ ಅಭಿವೃದ್ಧಿಗೆ ಸಹಕಾರವೇ ಸರಿಯಾದ ಮಾರ್ಗ**

ಸಂಚಾಲಕರು

ಸಂಚಾಲಕರು,
ಪಠ್ಯೇತರ ಚಟುವಟಿಕೆ ವಿಭಾಗ,
ಕುವೆಂಪು ವಿಶ್ವವಿದ್ಯಾನಿಲಯ
ಶಂಕರಘಟ್ಟ-577 451. ಶಿವಮೊಗ್ಗ ಜಿಲ್ಲೆ

ಗೆ,

ಎಲ್ಲಾ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರುಗಳು ಕುವೆಂಪು ವಿಶ್ವವಿದ್ಯಾನಿಲಯ ಶಂಕರಘಟ್ಟ.

**ಪ್ರತಿ:**

1) ಮಾನ್ಯ ಕುಲಸಚಿವರು, ಕುವೆಂಪು ವಿಶ್ವವಿದ್ಯಾನಿಲಯ ಶಂಕರಘಟ್ಟ.
2) ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ಸದರಿ ವಿಷಯವನ್ನು ಮಾನ್ಯ ಕುಲಪತಿಗಳ ಅವಗಾಹನೆಗೆ ತರಲು ಕೋರಿದೆ